# ಕರ್ನಾಟಕ ವಿಧಾನ ಪರಿಷತ್

| | | |
|---|---|---|
| ಮಾನ್ಯ ವಿಧಾನ ಪರಿಷತ್ತ ಸದಸ್ಯರ ಹೆಸರು | : | ಶ್ರೀ ಆರ್.ಧರ್ಮಸೇನ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಚುಕ್ಕೆ ಗುರುತಿಲ್ಲದ ಪ್ರಶ್ನೆ | : | 719 |
| ಉತ್ತರಿಸಬೇಕಾದವರು | : | ಮಾನ್ಯ ಗಣಿ ಮತ್ತು ಭೂ ವಿಜ್ಞಾನ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರು |
| ಉತ್ತರಿಸಬೇಕಾದ ದಿನಾಂಕ | : | 17.09.2021 |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಇದುವರೆಗೆ ಎಷ್ಟು ದೇವದಾಸಿಯರನ್ನು ಗುರುತಿಸಲಾಗಿದೆ; ಅವರಿಗಾಗಿ ಯಾವ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ; (ವಿವರ ನೀಡುವುದು) | • 1993–94 ಮತ್ತು 2007–08ನೇ ಸಾಲುಗಳಲ್ಲಿ ನಡೆಸಲಾದ ಸಮೀಕ್ಷೆಯಲ್ಲಿ ರಾಜ್ಯದ 14 ಜಿಲ್ಲೆಗಳಲ್ಲಿ ಒಟ್ಟು 46,660 ಮಾಜಿ ದೇವದಾಸಿ ಮಹಿಳೆಯರನ್ನು ಗುರುತಿಸಲಾಗಿದೆ.<br><br>• ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದಿಂದ ಹಮ್ಮಿಕೊಂಡಿರುವ ಕಾರ್ಯಕ್ರಮಗಳ ವಿವರ ಇಂತಿದೆ.<br><br>1. **ಮಾಜಿ ದೇವದಾಸಿ ಮಹಿಳೆಯರ ಪುನರ್ವಸತಿ ಯೋಜನೆ:–** ಮಾಜಿ ದೇವದಾಸಿ ಮಹಿಳೆಯರನ್ನು ಆರ್ಥಿಕವಾಗಿ ಸಬಲೀಕರಣಗೊಳಿಸಲು ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದ ಮೂಲಕ ರೂ.30,000/- ಪ್ರೋತ್ಸಾಹಧನವನ್ನು ನೀಡಲಾಗುತ್ತಿದೆ.<br><br>ದೇವದಾಸಿ ನಿಷೇಧ ಕಾಯ್ದೆ ಬಗ್ಗೆ ಬೀದಿ ನಾಟಕ, ಜಾತ್ರಾ ಜಾಗೃತಿ ಶಿಬಿರಗಳು, ಗೋಡೆ ಬರಹ, ಕರಪತ್ರ ಹಂಚುವಿಕೆ ಮತ್ತು ರ್‍ಯಾಲಿಗಳನ್ನು ಹಮ್ಮಿಕೊಳ್ಳುವುದರ ಮೂಲಕ ವ್ಯಾಪಕ ಪ್ರಚಾರ ನೀಡಲಾಗುತ್ತಿದೆ. ಜಿಲ್ಲಾಡಳಿತ ಹಾಗೂ ಪೋಲಿಸ್ ಇಲಾಖೆ ಸಹಕಾರದೊಂದಿಗೆ ಜಾತ್ರೆ ಸಮಯದಲ್ಲಿ ಈ ಆಚರಣೆ ಮಾಡದಂತೆ ಜಾಗೃತಿ ಮೂಡಿಸಲಾಗುತ್ತಿದೆ.<br><br>ಆರೋಗ್ಯ ತಪಾಸಣಾ ಶಿಬಿರಗಳು ಹಾಗೂ ಕಾನೂನು ಅರಿವು ಶಿಬಿರಗಳನ್ನು ಆಯೋಜಿಸಲಾಗುತ್ತಿದೆ.<br><br>2. **ಮಾಜಿ ದೇವದಾಸಿಯರಿಗೆ ಮಾಸಾಶನ ಯೋಜನೆ:–** 45 ವರ್ಷ ಮೇಲ್ಪಟ್ಟ ಮಾಜಿ ದೇವದಾಸಿಯರಿಗೆ ಮಾಸಿಕ ರೂ.1,500/–ಗಳ ಮಾಸಾಶನವನ್ನು ನೀಡಲಾಗುತ್ತಿದೆ.<br><br>3. **ಮಾಜಿ ದೇವದಾಸಿ ಮಹಿಳೆಯರಿಗೆ ವಸತಿ ಯೋಜನೆ:–** ನಿವೇಶನ ಹೊಂದಿರುವ ವಸತಿ ರಹಿತ ಮಾಜಿ ದೇವದಾಸಿ ಮಹಿಳೆಯರಿಗೆ ರಾಜೀವ್ ಗಾಂಧಿ ಗ್ರಾಮೀಣ ವಸತಿ ನಿಗಮದ ಮುಖಾಂತರ ವಸತಿ ನಿರ್ಮಾಣಕ್ಕೆ ಕ್ರಮ ವಹಿಸಲಾಗುತ್ತಿದೆ. |

<table>
<tr>
<td>ಆ)</td>
<td>ಎಷ್ಟು ದೇವದಾಸಿಯರಿಗೆ ಪುನರ್ವಸತಿ ಕಲ್ಪಿಸಲಾಗಿದೆ; ಇನ್ನೂ ಎಷ್ಟು ಜನರಿಗೆ ಕಲ್ಪಿಸಬೇಕಾಗಿದೆ: (ವಿವರ ನೀಡುವುದು)</td>
<td>ದೇವದಾಸಿ ಪುನರ್ವಸತಿ ಯೋಜನೆಯಡಿಯಲ್ಲಿ ಆದಾಯೋತ್ಪನ್ನಕರ ಚಟುವಟಿಕೆ ಕಾರ್ಯಕ್ರಮದಲ್ಲಿ ಒಟ್ಟಾರೆ 46660 ಮಾಜಿ ದೇವದಾಸಿಯರಲ್ಲಿ 2020-21ನೇ ಸಾಲಿನವರೆಗೆ 23292 ಮಾಜಿ ದೇವದಾಸಿಯರಿಗೆ ಸೌಲಭ್ಯ ಕಲ್ಪಿಸಲಾಗಿದೆ. ಪ್ರಸ್ತುತವಾಗಿ ಜೀವಂತವಿರುವ 9461 ಜನರಿಗೆ ಕಲ್ಪಿಸಬೇಕಾಗಿದೆ.<br><br>ಮಾಜಿ ದೇವದಾಸಿ ವಸತಿ ಯೋಜನೆಯಡಿ ನಿವೇಶನ ಹೊಂದಿರುವ 23111 ಮಾಜಿ ದೇವದಾಸಿಯರಲ್ಲಿ 2020-21ನೇ ಸಾಲಿನವರೆಗೆ 22156 ಮಾಜಿ ದೇವದಾಸಿಯರಿಗೆ ವಸತಿ ಕಲ್ಪಿಸಲಾಗಿರುತ್ತದೆ. ಬಾಕಿ 955 ನಿವೇಶನವುಳ್ಳ ಮಾಜಿ ದೇವದಾಸಿಯರಿಗೆ ವಸತಿ ಕಲ್ಪಿಸಬೇಕಾಗಿದೆ.</td>
</tr>
<tr>
<td>ಇ)</td>
<td>ದೇವದಾಸಿಯರ ಕಲ್ಯಾಣಕ್ಕಾಗಿ ಹಮ್ಮಿಕೊಂಡಿರುವ ಕಾರ್ಯಕ್ರಮಗಳ ಅನುಷ್ಠಾನಕ್ಕಾಗಿ ಮೀಸಲಿಟ್ಟ ಹಾಗೂ ಖರ್ಚಾಗಿರುವ ಹಣವೆಷ್ಟು; (ಕಳೆದ ಎರಡು ವರ್ಷಗಳ ಮಾಹಿತಿ ನೀಡುವುದು)</td>
<td>ದೇವದಾಸಿಯರ ಕಲ್ಯಾಣಕ್ಕಾಗಿ ಹಮ್ಮಿಕೊಂಡಿರುವ ಕಾರ್ಯಕ್ರಮಗಳ ಅನುಷ್ಠಾನಕ್ಕಾಗಿ ಮೀಸಲಿಟ್ಟ ಹಾಗೂ ಖರ್ಚಾಗಿರುವ ಹಣದ ವಿವರ ಈ ಕೆಳಗಿನಂತಿದೆ.<br>(ರೂ.ಲಕ್ಷಗಳಲ್ಲಿ)
<table>
<tr><th>ಯೋಜನೆಯ ಹೆಸರು</th><th>ಆಯವ್ಯಯದಲ್ಲಿ ಮೀಸಲಿಟ್ಟ ಅನುದಾನ</th><th>ಖರ್ಚಾದ ಅನುದಾನ</th></tr>
<tr><td colspan="3">ವರ್ಷ: 2019-20</td></tr>
<tr><td>ದೇವದಾಸಿ ಪುನರ್ವಸತಿ ಯೋಜನೆ</td><td>830.00</td><td>830.00</td></tr>
<tr><td>ಮಾಜಿ ದೇವದಾಸಿಯರ ಮಾಸಾಶನ ಯೋಜನೆ</td><td>4772.00</td><td>4772.00</td></tr>
<tr><td>ಮಾಜಿ ದೇವದಾಸಿಯರ ವಸತಿ ಯೋಜನೆ</td><td>1417.00</td><td>1417.00</td></tr>
<tr><td colspan="3">ವರ್ಷ: 2020-21</td></tr>
<tr><td>ದೇವದಾಸಿ ಪುನರ್ವಸತಿ ಯೋಜನೆ</td><td>500.00</td><td>500.00</td></tr>
<tr><td>ಮಾಜಿ ದೇವದಾಸಿಯರ ಮಾಸಾಶನ ಯೋಜನೆ</td><td>5423.40</td><td>5423.40</td></tr>
<tr><td>ಮಾಜಿ ದೇವದಾಸಿಯರ ವಸತಿ ಯೋಜನೆ</td><td>0.00</td><td>0.00</td></tr>
</table>
</td>
</tr>
</table>

**ಸಂಖ್ಯೆ:ಮಮಇ/84/ಮಅನಿ/2021**

**(ಹಾಲಪ್ಪ ಬಸಪ್ಪ ಆಚಾರ್)**

ಮಾನ್ಯ ಗಣಿ ಮತ್ತು ಭೂವಿಜ್ಞಾನ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ
ಮತ್ತು ವಿಕಲಚೇತನರ ಹಾಗೂ ಹಿರಿಯ ನಾಗರೀಕರ ಸಬಲೀಕರಣ ಸಚಿವರು